ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

("ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ)

**Visvesvaraya Technological University**

(State University of Government of Karnataka Established as per the VTU Act, 1994)

"Jnana Sangama" Belagavi-590018, Karnataka, India

ರಾಷ್ಟ್ರೀಯ ಸೇವಾ ಯೋಜನೆ

ಪ್ರೊ. ಬಿ.ಈ. ರಂಗಸ್ವಾಮಿ ಪಿಹೆಚ್.ಡಿ.
ಕುಲಸಚಿವರು

ದೂರವಾಣಿ ಸಂ : 0831-2405468
ಫ್ಯಾಕ್ಸ ಸಂ : 0831-2405467

ಸಂ. ವಿತಾವಿ/ಬಿ.ಜಿ.ಎಮ್/ರಾ.ಸೇ.ಯೋ/ಸ.ದಿ/19/2024-25/1617 ದಿನಾಂಕ: 16 AUG 2024

**:ಸುತ್ತೋಲೆ:**

**ವಿಷಯ :** ಆಗಸ್ಟ್ 20ರಂದು ***"ಸದ್ಭಾವನಾ ದಿನ"*** ವನ್ನಾಗಿ ಆಚರಿಸುವ ಬಗ್ಗೆ.

**ಉಲ್ಲೇಖ:** ಸಿಆಸುಇ 04/ಪಿಹೆಚ್ಎಲ್/2024 ದಿನಾಂಕ:13/08/2024

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಅಧೀನಕ್ಕೊಳಪಡುವ ಸಂಬಂಧಪಟ್ಟ ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳ ಪ್ರಾಂಶುಪಾಲರು ಮತ್ತು ಎನ್.ಎಸ್.ಎಸ್.ಕಾರ್ಯಕ್ರಮಾಧಿಕಾರಿಗಳಿಗೆ ತಿಳಿಬಯಸುವದೇನೆಂದರೆ, ಪ್ರತಿ ವರ್ಷ ಆಗಸ್ಟ್ 20ರಂದು *"ಸದ್ಭಾವನಾ ದಿನ"* ಆಚರಿಸಲಾಗುತ್ತಿದೆ. ಅದರಂತೆ ದಿನಾಂಕ:20/08/2024ರಂದು ತಮ್ಮ ಮಹಾವಿದ್ಯಾಲಯದಲ್ಲಿ ***ಸದ್ಭಾವನಾ ದಿನಾಚರಣೆಯನ್ನು*** ಆಚರಿಸುವುದರೊಂದಿಗೆ ವಿದ್ಯಾರ್ಥಿಗಳು ಮತ್ತು ಎಲ್ಲಾ ಸಿಬ್ಬಂದಿಗಳಿಗೆ *ಸದ್ಭಾವನಾ* ಪ್ರತಿಜ್ಞೆಯನ್ನು ಕಡ್ಡಾಯವಾಗಿ ಬೋಧಿಸಲು ಕೋರಲಾಗಿದೆ. ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ.

ಮುಂದುವರೆದು, ಕಾರ್ಯಕ್ರಮ ಆಯೋಜಿಸಿರುವ ಕುರಿತು ಸಂಕ್ಷಿಪ್ತ ವರದಿಯನ್ನು (ಛಾಯಾಚಿತ್ರಗಳೊಂದಿಗೆ) ವಿ.ತಾ.ವಿ.ಯ ರಾ.ಸೇ.ಯೋ. ಕೋಶಕ್ಕೆ (e-mail:nss@vtu.ac.in) ಇ–ಮೇಲ್ ಮೂಲಕ ಸಲ್ಲಿಸಲು ಸೂಚಿಸಲಾಗಿದೆ.

ವಂದನೆಗಳೊಂದಿಗೆ,

16/08/24

**ಕುಲಸಚಿವರು**

**ಇವರಿಗೆ,**

ಪ್ರಾಂಶುಪಾಲರು/ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಅಧ್ಯಕ್ಷರು,
ವಿ.ತಾ.ವಿ. ಅಧಿನಕ್ಕೊಳಪಡುವ ಸಂಬಂಧಪಟ್ಟ
ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ ಕುಲಪತಿಗಳ ಕಾರ್ಯದರ್ಶಿಗಳ ಮುಖಾಂತರ.
2. ಪ್ರಾದೇಶಿಕ ನಿರ್ದೇಶಕರು, ವಿತಾವಿಯ ಪ್ರಾದೇಶಿಕ ಕಛೇರಿ ಬೆಳಗಾವಿ, ಕಲಬುರಗಿ, ಮೈಸೂರು ಮತ್ತು ಬೆಂಗಳೂರು.
3. ನಿರ್ದೇಶಕರು, ಸಿ.ಎನ್.ಸಿ ವಿಭಾಗ, ವಿತಾವಿ., ಬೆಳಗಾವಿ, ಇವರಿಗೆ ಸದರಿ ಸುತ್ತೋಲೆಯನ್ನು ವಿ.ತಾ.ವಿ.ಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ಕಛೇರಿ ಕಡತಕ್ಕೆ.

# ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಭೇದಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಭೇದಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇವೆಂದು ಸಹ ಪ್ರತಿಜ್ಞೆ ಮಾಡುತ್ತೇನೆ.